## ರಾಜ್ಯದಲ್ಲಿ ಹೆಚ್ಚುತ್ತಿರುವ ಜನಸಂಖ್ಯೆ ಪ್ರಮಾಣಕ್ಕನುಗುಣವಾಗಿ ಪೋಲೀಸ್ ಸಿಬ್ಬಂದಿಗಳನ್ನು ಹೆಚ್ಚಿಸುವುದು

೨೮ (೪೬) ಶ್ರೀ ಮಲ್ಲಿಕಾರ್ಜುನ ವಿ. ಬನ್ನಿ (ಗುಳೇದಗುಡ್ಡ).— ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ರಾಜ್ಯದಲ್ಲಿ ಹೆಚ್ಚುತ್ತಿರುವ ಜನಸಂಖ್ಯೆ ಪ್ರಮಾಣಕ್ಕನುಗುಣವಾಗಿ ಪೋಲೀಸ್ ಸಿಬ್ಬಂದಿಗಳ ಸಂಖ್ಯಾಬಲ ಅತಿ ಕಡಿಮೆ ಇರುವ ವಿಷಯ ಸರ್ಕಾರದವರ ಗಮನಕ್ಕೆ ಬಂದಿದೆಯೆ?

ಆ) ೧೯೫೬ರಲ್ಲಿ ಇದ್ದ ಪೋಲೀಸರ ಸಂಖ್ಯಾಬಲವು ೧೯೮೫ರಲ್ಲಿಯೂ ಮುಂದುವರೆದಿರುವುದಕ್ಕೆ ಕಾರಣಗಳೇನು ?

ಇ) ಹಾಗಿದ್ದಲ್ಲಿ ಪೋಲೀಸ್ ಸಿಬ್ಬಂದಿಯನ್ನು ಹೆಚ್ಚಿಸುವ ಬಗ್ಗೆ ಸರ್ಕಾರವು ಕ್ರಮ ಕೈಗೊಳ್ಳುವುದೆ?

ಶ್ರೀ ರಮೇಶ ಜಿಗಜಿಣಗಿ (ಗೃಹ ರಾಜ್ಯ ಮಂತ್ರಿಗಳು).—

ಅ) ಜನಸಂಖ್ಯೆಯ ಅನುಗುಣವಾಗಿಯೇ ಪೋಲೀಸ್ ಸಿಬ್ಬಂದಿಯನ್ನು ನೇಮಿಸಬೇಕೆಂಬ ನಿಯಮ ಇಲ್ಲ. ಪೋಲೀಸ್ ಸಿಬ್ಬಂದಿಯ ನೇಮಕವನ್ನು ಕಾನೂನು ಮತ್ತು ಶಾಂತಿಪಾಲನೆಯ ಆವಶ್ಯಕತೆಯನ್ನು ಗಮನದಲ್ಲಿಟ್ಟುಕೊಂಡು ಮಾಡಲಾಗುತ್ತದೆ.

ಆ) ೧೯೫೬ರಲ್ಲಿ ಇದ್ದ ಪೋಲೀಸರ ಸಂಖ್ಯಾಬಲವನ್ನು ೧೯೮೫ರಲ್ಲಿ ಮುಂದುವರಿಸಿಲ್ಲ. ಆದರೆ ಆಗಿಂದಾಗ್ಗೆ ಪೋಲೀಸರ ಸಂಖ್ಯಾಬಲವನ್ನು ಹೆಚ್ಚಿಸುತ್ತಾ ಬಂದಿದೆ.

ಇ) ಆವಶ್ಯಕವನ್ನು ಅನುಸರಿಸಿ ಕ್ರಮ ಕೈಗೊಳ್ಳಲಾಗುವುದು.

## ಗುಳೇದಗುಡ್ಡ ಸಾರ್ವತ್ರಿಕ ಆಸ್ಪತ್ರೆಗೆ ಮಹಿಳಾ ವೈದ್ಯಾಧಿಕಾರಿ ನೇಮಕ ಮಾಡುವುದು

೨೯ (೧೯೧) ಶ್ರೀ ಮಲ್ಲಿಕಾರ್ಜುನ ವಿ. ಬನ್ನಿ (ಗುಳೇದಗುಡ್ಡ).— ಮಾನ್ಯ ಕುಟುಂಬ ಕಲ್ಯಾಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ಗುಳೇದಗುಡ್ಡ ಸಾರ್ವತ್ರಿಕ ಆಸ್ಪತ್ರೆಯಲ್ಲಿ ಸುಮಾರು ಎರಡು ವರ್ಷಗಳಿಂದ ಮಹಿಳಾ ವೈದ್ಯಾಧಿಕಾರಿಯು ಇಲ್ಲದಿರುವುದು ಸರಕಾರದವರ ಗಮನಕ್ಕೆ ಬಂದಿದೆಯೆ?

ಆ) ಹಾಗಿದ್ದಲ್ಲಿ, ಖಾಲಿಯಿರುವ ಮಹಿಳಾ ವೈದ್ಯಾಧಿಕಾರಿ ಹುದ್ದೆಯನ್ನು ಯಾವಾಗ ಭರ್ತಿ ಮಾಡಲಾಗುವುದು?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಮಂತ್ರಿಗಳು).—

ಅ) ಹೌದು.

ಆ) ಸ್ನಾತಕೋತ್ತರ ಪದವಿ ಶಿಕ್ಷಣಕ್ಕೆ ನಿಯೋಜಿಸಿರುವ ಮಹಿಳಾ ವೈದ್ಯರುಗಳು ಫೆಬ್ರುವರಿ ತಿಂಗಳೊಳಗೆ ಪಾಸಾಸ್ಸು ಬಂದನಂತರ ಆ ಹುದ್ದೆಯನ್ನು ಭರ್ತಿ ಮಾಡಲಾಗುವುದು.

## ಹಂನಗುಂದ ತಾಲ್ಲೂಕಿನ ಅಮೀನಗಡ ನಗರದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸ್ಥಾಪಿಸುವುದು

೩೦ (೨೮) ಶ್ರೀ ಮಲ್ಲಿಕಾರ್ಜುನ ವಿ. ಬನ್ನಿ (ಗುಳೇದಗುಡ್ಡ).— ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ:—

ಅ) ಗುಳೆ ದಗುಡ್ಡ ಕ್ಷೇತ್ರದ ಹುನಗುಂದ ತಾಲ್ಲೂಕಿನ ಅಮೀನಗಡ ನಗರ ಪಂಚಾಯಿತಿಯವರಿಂದ ರಾಜ್ಯ ಸರ್ಕಾರವು ೧೯೮೦ರಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಪ್ರಾರಂಭಿಸಲು ೨೫,೦೦,೦೦ ರೂಪಾಯಿ ಭರ್ತಿ ಮಾಡಿಸಿಕೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ?